# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | **394** |
| **ಮಾನ್ಯ ಸದಸ್ಯರ ಹೆಸರು** | : | **ಶ್ರೀ ಶಿವಕುಮಾರ್ ಕೆ (ನಾಮನಿರ್ದೇಶನ ಹೊಂದಿದವರು)** |
| **ಉತ್ತರಿಸುವ ದಿನಾಂಕ** | : | **29.01.2026** |
| **ಉತ್ತರಿಸುವ ಸಚಿವರು.** | : | **ಗೃಹ ಸಚಿವರು.** |

<table>
<tr><th>ಕ್ರ . ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಕಳೆದ ಐದು ವರ್ಷಗಳಲ್ಲಿ ರಾಜ್ಯದಲ್ಲಿ ಎಷ್ಟು ಸೈಬರ್ ಕ್ರೈಂ ಪ್ರಕರಣಗಳು ದಾಖಲಾಗಿವೆ ಹಾಗೂ ಎಷ್ಟು ಪ್ರಮಾಣದಲ್ಲಿ ಹೆಚ್ಚಾಗಿವೆ; ಇದನ್ನು ಪತ್ತೆ ಹಚ್ಚಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಎಷ್ಟು ಆರೋಪಿಗಳನ್ನು ಬಂಧಿಸಲಾಗಿದೆ;</td><td>ರಾಜ್ಯದಲ್ಲಿ ಕಳೆದ ಐದು ವರ್ಷದಲ್ಲಿ ದಾಖಲಾಗಿರುವ ಸೈಬರ್ ಅಪರಾಧ ಪ್ರಕರಣಗಳು ಮತ್ತು ಪತ್ತೆ ಹಚ್ಚಲಾದ ಪ್ರಕರಣಗಳ ವಿವರಗಳು ಈ ಕೆಳಕಂಡಂತಿದೆ:-
<table>
<tr><th>ವರ್ಷ</th><th>ದಾಖಲಿಸಿರುವ ಸೈಬರ್ ಅಪರಾಧ ಪ್ರಕರಣಗಳ ಸಂಖ್ಯೆ</th><th>ಬಂಧಿಸಲಾದ ಆರೋಪಿಗಳ ಸಂಖ್ಯೆ</th></tr>
<tr><td>2021</td><td>8396</td><td>974</td></tr>
<tr><td>2022</td><td>12920</td><td>1062</td></tr>
<tr><td>2023</td><td>22255</td><td>1097</td></tr>
<tr><td>2024</td><td>22482</td><td>1017</td></tr>
<tr><td>2025</td><td>14889</td><td>695</td></tr>
</table>
ಕಳೆದ 2023 ಮತ್ತು 2024ನೇ ವರ್ಷಕ್ಕೆ ಹೋಲಿಸಿದರೆ 2025ರಲ್ಲಿ ಸೈಬರ್ ಅಪರಾಧಗಳ ಸಂಖ್ಯೆ ಕಡಿಮೆಯಾಗಿರುವುದು ಕಂಡು ಬಂದಿರುತ್ತದೆ.<br><br>
ಸೈಬರ್ ಅಪರಾಧ ಪ್ರಕರಣಗಳನ್ನು ಪತ್ತೆ ಹಚ್ಚಲು ಸರ್ಕಾರ ಕೈಗೊಂಡ ಕ್ರಮಗಳು ಈ ಕೆಳಕಂಡಂತಿವೆ:-<br><br>
ರಾಜ್ಯದಲ್ಲಿ ಇಂಟರ್‌ನೆಟ್ ಮೊಬೈಲ್ ಫೋನ್ ಆನ್‌ಲೈನ್ ಮೂಲಕ ವಂಚನೆಗೊಳಗಾಗುತ್ತಿರುವ ಪ್ರಕರಣಗಳಿಗೆ ಸಂಬಂಧಿಸಿದಂತೆ ಅಲ್ಲದೇ ಪ್ರತಿ ದಿನ ದಾಖಲಾಗುವ ಪ್ರಕರಣಗಳನ್ನು ಶೀಘ್ರವಾಗಿ ವಿಚಾರಣೆ ನಡೆಸಲು ಸರ್ಕಾರದ ಆದೇಶ ಸಂಖ್ಯೆ: ಹೆಚ್‌ಡಿ /177/ಪಿಓಪಿ/2024, ದಿನಾಂಕ:01/08/2025 ರಲ್ಲಿ ರಾಜ್ಯದ 45 CEN ಪೊಲೀಸ್ ಠಾಣೆಗಳನ್ನು ಸೈಬರ್ ಅಪರಾಧ ಪೊಲೀಸ್ ಠಾಣೆಗಳೆಂದು (Cyber Crime Police Station) ಎಂದು ಮರುಪದನಾಮೀಕರಿಸಿ</td></tr>
</table>

| | | |
|---|---|---|
| | | ಆದೇಶೀಸಿದೆ. ಸೈಬರ್ ಅಪರಾಧ ಪೊಲೀಸ್ ಠಾಣೆಗಳಲ್ಲಿ **Information Technology Act -2000 IPC/BNS** ಅಡಿಯಲ್ಲಿ ದಾಖಲಾಗುವ ಪ್ರಕರಣಗಳನ್ನು ದಾಖಲಿಸಲು ಹಾಗೂ ತನಿಖೆ ಕೈಗೊಳ್ಳಲು ಅಧಿಕಾರ ನೀಡಿ, ವ್ಯಾಪ್ತಿ ನಿಗಧಿಪಡಿಸಿ ಅಧಿಸೂಚಿಸಲಾಗಿದೆ.<br><br>➢ ರಾಜ್ಯದಲ್ಲಿ DGP ಸೈಬರ್ ಕಮಾಂಡ್ ಹುದ್ದೆ ಸೃಜಿಸಲಾಗಿದೆ. ಇವರು ಸೈಬರ್ ಕ್ರೈಂ ಪೊಲೀಸ್ ಠಾಣೆಗಳ ಕಮಾಂಡಿಂಗ್ ಅಧಿಕಾರಿಯಾಗಿರುತ್ತಾರೆ. ಎಲ್ಲಾ ಸೈಬರ್ ಕ್ರೈಂ ಪೊಲೀಸ್ ಠಾಣೆಗಳು ನೇರವಾಗಿ ಇವರಿಗೆ ಕಾರ್ಯ ವರದಿ ಸಲ್ಲಿಸಿಕೊಂಡು ಕರ್ತವ್ಯ ನಿರ್ವಹಿಸುತ್ತಿರುತ್ತವೆ. ಈ ಕ್ರಮದಿಂದ ಸೈಬರ್ ಅಪರಾಧಗಳ ತನಿಖಾ ವೇಗ ಹೆಚ್ಚಲಿದೆ.<br>➢ ಭಾರತದ ಪ್ರಥಮ ವಿಶೇಷ ಸೈಬರ್ ಪೊಲೀಸ್ ಠಾಣೆಯನ್ನು 2001ರಲ್ಲಿ ಬೆಂಗಳೂರು ನಗರದಲ್ಲಿ ಸ್ಥಾಪಿಸಲಾಗಿರುತ್ತದೆ.<br>➢ ಸಿಐಡಿ ಅಡಿಯಲ್ಲಿ ಸೈಬರ್ ಕ್ರೈಂ ವಿಭಾಗವು ರಾಜ್ಯದ ಸೈಬರ್ ಅಪರಾಧ ತನಿಖೆಗೆ ಕೇಂದ್ರ ಕಛೇರಿ ಆಗಿದ್ದು, ಇತರೆ ಘಟಕಗಳೊಂದಿಗೆ ಸಮನ್ವಯವನ್ನು ಸಾಧಿಸುತ್ತಿದೆ.<br>➢ ಸೈಬರ್ ಅಪರಾಧಗಳಿಗೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರದಿಂದ ಗೃಹ ಸಚಿವಾಲಯದ ಎನ್.ಸಿ.ಆರ್.ಪಿ (National Cyber Crime Reporting Portal)ನಲ್ಲಿ ದೂರುಗಳನ್ನು ದಾಖಲಿಸಲು ಸಾರ್ವಜನಿಕರಿಗೆ ಅವಕಾಶವಿದ್ದು, ದೂರುಗಳನ್ನು ದಾಖಲಿಸಿದ ನಂತರ ಈ ಪೋರ್ಟಲ್ ಮುಖಾಂತರ ಪಡೆದುಕೊಂಡು ತನಿಖೆಯನ್ನು ಕೈಗೊಂಡಿರುತ್ತದೆ.<br>➢ ಸೈಬರ್ ಅಪರಾಧಗಳಿಗೆ ಸಂಬಂಧಿಸಿದಂತೆ ಪ್ರತ್ಯೇಕವಾದ ನ್ಯಾಯಾಲಯವನ್ನು ಸೃಜನೆ ಮಾಡಲಾಗಿರುತ್ತದೆ.<br>➢ ಪ್ರತಿ ಸೈಬರ್ ಠಾಣೆಯಲ್ಲಿ ಸೈಬರ್ ಕ್ರೈಂಗೆ ಸಂಬಂಧಿಸಿದಂತೆ ಪ್ರಕರಣಗಳ ತನಿಖೆಯನ್ನು ಕೈಗೊಳ್ಳಲು ಪೊಲೀಸ್ ಇನ್ಸ್‌ಪೆಕ್ಟರ್ ಹುದ್ದೆಯನ್ನು ಡಿವೈಎಸ್ಪಿ / ಎಸಿಪಿ ಹುದ್ದೆಗಳನ್ನಾಗಿ ಮೇಲ್ದರ್ಜೆಗೇರಿಸಿ ಆದೇಶಿಸಿರುತ್ತದೆ.<br>➢ ಠಾಣಾ ಸರಹದ್ದಿನಲ್ಲಿ ಬರುವಂತಹ ಕಂಪನಿಗಳು, ಶಾಲಾ ಕಾಲೇಜುಗಳು, ಅಪಾರ್ಟ್‌ಮೆಂಟ್, ಪಾರ್ಕ್ ಮುಂತಾದ ಸ್ಥಳಗಳಲ್ಲಿ ಸೈಬರ್ ಕ್ರೈಂ ಬಗ್ಗೆ ಜಾಗೃತಿ ಕಾರ್ಯಕ್ರಮಗಳನ್ನು ಮೂಡಿಸಲಾಗುತ್ತಿದೆ. |

| | | |
|---|---|---|
| | | ➢ ಟಿ.ವಿ ಮಾಧ್ಯಮ ಮತ್ತು ಪತ್ರಿಕಾ ಮಾಧ್ಯಮಗಳಲ್ಲಿ ಸೈಬರ್ ಅಪರಾಧಗಳ ಬಗ್ಗೆ ಜಾಹಿರಾತು ನೀಡಲಾಗಿರುತ್ತದೆ.<br>➢ ಸೈಬರ್ ಅಪರಾಧ ಪ್ರಕರಣಗಳನ್ನು ತ್ವರಿತಗತಿಯಲ್ಲಿ ಪತ್ತೆ ಹಚ್ಚುವ ಸಂಬಂಧ ಸೈಬರ್ ಕಮಾಂಡ್ ಯುನಿಟ್ ರಚನೆಯಾಗಿರುತ್ತದೆ.<br>➢ ಬ್ಯಾಂಕ್‌ಗಳ ನೋಡಲ್ ಅಧಿಕಾರಿಗಳಿಗೆ ಮಾಸಿಕ ಸಭೆಗಳನ್ನು ತೆಗದುಕೊಂಡು ಸೈಬರ್ ಪ್ರಕರಣಗಳಲ್ಲಿ ಭಾಗಿಯಾಗುವ ಖಾತೆಗಳ ಮೇಲೆ ನಿಗಾವಹಿಸಿ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿರುತ್ತದೆ. ಸಿಸಿಯು ಘಟಕದಿಂದ ಸಾಮಾಜಿಕ ಜಾಲತಾಣಗಳಾದ ಫೇಸ್‌ಬುಕ್, ವಾಟ್ಸ್‌ಆಪ್ ಹಾಗೂ ಟ್ವೀಟರ್‌ಗಳ ಮೂಲಕ ಸೈಬರ್ ಜಾಗೃತಿಯ ಸಂದೇಶಗಳನ್ನು ರವಾನಿಸುವ ಮೂಲಕ ಸಾರ್ವಜನಿಕರಲ್ಲಿ ಜಾಗೃತಿ ನೀಡಲಾಗುತ್ತಿದೆ. ಶಾಲಾ ಕಾಲೇಜುಗಳಿಗೆ, ಇತರೆ ಸಂಸ್ಥೆಗಳಿಗೆ ಭೇಟಿ ನೀಡಿ ವಿದ್ಯಾರ್ಥಿ ಹಾಗೂ ಸಾರ್ವಜನಿಕರುಗಳಿಗೆ ಡಿಜಿಟಲ್ ಅರೆಸ್ಟ್ ಹಾಗೂ ಇತರ ವಂಚನೆಗಳ ಬಗ್ಗೆ ಜಾಗೃತಿ ಮೂಡಿಸಲು ಜಾಗೃತಾ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.<br>➢ ಸೈಬರ್ ಅಪರಾಧ ಪ್ರಕರಣಗಳಲ್ಲಿ ಆರೋಪಿಗಳ ಮೇಲೆ ಕಠಿಣ ಕಾನೂನು ಕ್ರಮಕೈಗೊಳ್ಳಲು ಐ.ಟಿ ಕಾಯ್ದೆ ಹಾಗೂ BNSನ ವಿವಿಧ ಕಲಂಗಳ ಅಡಿಯಲ್ಲಿ ಪ್ರಕರಣಗಳನ್ನು ದಾಖಲಿಸಿಕೊಂಡು ಕಾನೂನು ಕ್ರಮ ಜರುಗಿಸಲಾಗುತ್ತಿದೆ.<br>➢ ಸಾರ್ವಜನಿಕರನ್ನು ಇಂತಹ ಅಪರಾಧಿಕ ಕೃತ್ಯಗಳ ಮೂಲಕ ವಂಚಿಸಲು ನಕಲಿ ಸಿಮ್‌ಕಾರ್ಡ್ ಹಾಗೂ ನಕಲಿ ಬ್ಯಾಂಕ್ ಖಾತೆಗಳನ್ನು ಮಾರಾಟಕ್ಕೆ ಬಳಸುವ ಸಾಮಾಜಿಕ ಜಾಲತಾಣಗಳಾದ ಫೇಸ್‌ಬುಕ್, ಟೆಲಿಗ್ರಾಂ, ಇತರೆ ಅಂತರ್ಜಾಲ ವೇದಿಕೆಗಳಲ್ಲಿ ಸಕ್ರಿಯವಾಗಿರುವ ಖಾತೆಗಳು ಹಾಗೂ ಗುಂಪುಗಳನ್ನು ಪತ್ತೆಹಚ್ಚಿ, 268 ಫೇಸ್‌ಬುಕ್ ಗುಂಪುಗಳು, 465 ಟೆಲಿಗ್ರಾಂ ಗುಂಪುಗಳು, 15 ಇನ್‌ಸ್ಟಾಗ್ರಾಂ ಖಾತೆಗಳು ಹಾಗೂ 61 ವಾಟ್ಸಪ್ ಗುಂಪುಗಳನ್ನು ನಿಷ್ಕ್ರೀಯಗೊಳಿಸಲಾಗಿರುತ್ತದೆ.<br>➢ ಸೈಬರ್ ಅಪರಾಧ ಸಹಾಯವಾಣಿಗಳಿಗೆ "ಗೋಲ್ಡನ್ ಅವರ್" ನಲ್ಲಿ ಬರುವ ದೂರುಗಳನ್ನು ಸ್ವೀಕರಿಸಲು ಕರ್ನಾಟಕ ಪೊಲೀಸ್ ಇಲಾಖೆ 1930 ಹೆಲ್ಪ್ ಲೈನ್ ಅನ್ನು ವೆಬ್‌ಬಾಟ್ ಸೌಲಭ್ಯದಿಂದ ಉನ್ನತೀಕರಿಸಿದೆ. ಇದರಿಂದ SMS ಮುಖಾಂತರ |

| | | |
|---|---|---|
| | | ಸ್ವಯಂ ಮಾಹಿತಿ ನೋಂದಣಿ ಮಾಡಿಕೊಳ್ಳಬಹುದಾಗಿರುತ್ತದೆ. ದೂರುಗಳನ್ನು "ಹಣಕಾಸು ಮತ್ತು ಹಣಕಾಸೇತರ" ಎಂದು ವಿಂಗಡಿಸುವ IVR ವ್ಯವಸ್ಥೆ ಕಲ್ಪಿಸಲಾಗಿರುತ್ತದೆ. ಹೆಚ್ಚು ಕರೆಗಳು ಬಂದಾಗ ಆಟೋಮೇಟೆಡ್ ಕರೆ ವ್ಯವಸ್ಥೆ ಮೂಲಕ ಧ್ವನಿ ಮಾರ್ಗದರ್ಶನ ಸೌಲಭ್ಯವಿರುತ್ತದೆ. ದೂರುದಾರರು ತಮ್ಮ ದೂರಿನ ಸ್ಥಿತಿ ಹಂತವನ್ನು ತಿಳಿದುಕೊಳ್ಳಬಹುದಾಗಿರುತ್ತದೆ. 24/7 ಕಾಲ್ ಸೆಂಟರ್ ಕರ್ತವ್ಯ ನಿರ್ವಹಿಸುತ್ತಿದೆ. |
| ಆ) | ಸೈಬರ್ ಕ್ರೈಂ ಪ್ರಕರಣಗಳನ್ನು ಪತ್ತೆ ಹಚ್ಚಲು ಗೃಹ ಇಲಾಖೆಯಿಂದ ಹೊಸ ಸಾಫ್ಟ್‌ವೇರ್ ಅಭಿವೃದ್ಧಿಪಡಿಸಲು ಕ್ರಮ ಕೈಗೊಳ್ಳಲಾಗಿದೆಯೇ? | ಸೈಬರ್ ಕ್ರೈಂ ಪ್ರಕರಣಗಳನ್ನು ಪತ್ತೆ ಹಚ್ಚಲು ಗೃಹ ಇಲಾಖೆಯಿಂದ ಹೊಸ ಸಾಫ್ಟ್‌ವೇರ್ ಅಭಿವೃದ್ಧಿಪಡಿಸಲು ಕ್ರಮ ಕೈಗೊಳ್ಳಲಾಗಿದೆ. |

**HD 10 PCQ 2026**

(ಡಾ: ಜಿ.ಪರಮೇಶ್ವರ)
ಗೃಹ ಸಚಿವರು